# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 15-03-2021 ಪ್ರಶ್ನೆ ಸಂಖ್ಯೆ : 1000(1318)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಂ. ನಾರಾಯಣಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 15-03-2021

ಉತ್ತರಿಸುವ ಸಚಿವರು: ಮಾನ್ಯ ಪ್ರವಾಸೋದ್ಯಮ ಮತ್ತು ಪರಿಸರ ಮತ್ತು ಜೀವಿ ಪರಿಸ್ಥಿತಿ ಸಚಿವರು

ವಿಷಯ : ಬೆಂಗಳೂರು ನಗರ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಯ ಬಗ್ಗೆ

(ಅ) ಬೆಂಗಳೂರು ನಗರ ಮತ್ತು ಜಿಲ್ಲೆಯಲ್ಲಿ ಪ್ರವಾಸೋದ್ಯಮ ಕೇಂದ್ರಗಳ ಅಭಿವೃದ್ಧಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಆ) ಬೆಂಗಳೂರು ನಗರ ಜಿಲ್ಲೆಯಲ್ಲಿ ಹೆರಿಟೇಜ್ ಟೂರಿಸಂ, ಹೆಲ್ತ್ ಟೂರಿಸಂ, ಎಜುಕೇಷನ್ ಟೂರಿಸಂ, ಚಿತ್ರೀಕರಣ ಟೂರಿಸಂಗಳ ಮೂಲಕ ಅಭಿವೃದ್ಧಿ ಮಾಡಲು ಸರ್ಕಾರ ಚಿಂತನೆ ಮಾಡಿದೆಯೇ; ಮಾಡಿದ್ದಲ್ಲಿ, ಈ ಬಗ್ಗೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು;

(ಇ) ಪ್ರವಾಸೋದ್ಯಮಗಳಿಗೆ ಸರ್ಕಾರ ಮೀಸಲಿಟ್ಟಿರುವ ಅನುದಾನವೆಷ್ಟು; ಪ್ರವಾಸೋದ್ಯಮದಿಂದ ಸರ್ಕಾರಕ್ಕೆ ಬಂದಿರುವ ಆದಾಯ ಎಷ್ಟು;

(ಈ) ಕಳೆದ ಮೂರು ವರ್ಷಗಳಿಂದ ಪ್ರವಾಸೋದ್ಯಮ ಇಲಾಖೆಯಲ್ಲಿ ಎಷ್ಟು ವಿದ್ಯಾವಂತ ನಿರುದ್ಯೋಗಿಗಳು ಉದ್ಯೋಗವನ್ನು ಪಡೆದಿರುತ್ತಾರೆ; ನಿರುದ್ಯೋಗಿಗಳಿಗೆ ಉದ್ಯೋಗಗಳನ್ನು ಸೃಷ್ಟಿಸಲು ಸರ್ಕಾರ ಯಾವ ಯೋಜನೆಗಳನ್ನು ರೂಪಿಸಿದೆ?